**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂ: ಡಿಸಿಇ/ಟಿಆರ್‌ಎನ್/1/2022-ಟಿಡಿಜಿ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಕಛೇರಿ ಬೆಂಗಳೂರು. ದಿನಾಂಕ: 20.12.2022.

## ಸುತ್ತೋಲೆ

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ವೈದ್ಯಕೀಯ ಪ್ರಕರಣಗಳ ಬೋಧಕರ ವರ್ಗಾವಣೆಯ ತಾತ್ಕಾಲಿಕ ಆದ್ಯತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸಮ ಸಂಖ್ಯೆಯ ದಿನಾಂಕ:14-12-2022ರ ಅಧಿಸೂಚನೆ

** ** **

ಈ ಕಛೇರಿಯ ಉಲ್ಲೇಖಿತ ಸಮ ಸಂಖ್ಯೆಯ ಅಧಿಸೂಚನೆಯೊಂದಿಗೆ ಆನ್‌ಲೈನ್ ಮೂಲಕ ಸಲ್ಲಿಸಲಾದ ವಿಶೇಷ ಪ್ರಕರಣಗಳಡಿ ಕೋರಿಕೆ ವರ್ಗಾವಣೆಯ ಮನವಿಗಳಲ್ಲಿ ವೈದ್ಯಕೀಯ ಪ್ರಕರಣಗಳಿಗೆ ಸಂಬಂಧಿಸಿದಂತೆ ಪರಿಶೀಲನೆ ನಡೆಯುತ್ತಿದ್ದರಿಂದ ವೈದ್ಯಕೀಯ ಪ್ರಕರಣಗಳನ್ನು ಹೊರತುಪಡಿಸಿ ಆಕ್ಷೇಪಣೆಗಳನ್ನು ಕೋರಿ ವರ್ಗಾವಣೆಗೆ ಅರ್ಹರಾಗುವ ಬೋಧಕರ ವಲಯವಾರು ಮತ್ತು ವರ್ಗವಾರು ತಾತ್ಕಾಲಿಕ ಆದ್ಯತಾ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

ಪ್ರಸ್ತುತ ವೈದ್ಯಕೀಯ ಪ್ರಕರಣಗಳಿಗೆ ಸಂಬಂದಿಸಿದಂತೆ ತಾತ್ಕಾಲಿಕ ಆದ್ಯತಾ ಪಟ್ಟಿಯನ್ನು ಈ ಸುತ್ತೋಲೆಗೆ ಲಗತ್ತಿಸಲಾಗಿದ್ದು, ಸದರಿ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ಪೂರಕ ದಾಖಲೆಗಳೊಂದಿಗೆ ಮನವಿಯನ್ನು ದಿನಾಂಕ:21-12-2022ರ ಸಂಜೆ 5.00 ಗಂಟೆಯ ಒಳಗಾಗಿ dce.transfer2022@gmail.com ವಿಳಾಸಕ್ಕೆ ಇಮೇಲ್ ಮೂಲಕ ಸಲ್ಲಿಸುವಂತೆ ಸೂಚಿಸಿದೆ. ಭೌತಿಕವಾಗಿ ಸಲ್ಲಿಸುವ ಮತ್ತು ನಿಗದಿತ ಸಮಯದ ನಂತರ ಸಲ್ಲಿಸುವ ಹಾಗೂ ಅಪೂರ್ಣ ಮಾಹಿತಿಯನ್ನು ಪರಿಗಣಿಸಲಾಗುವುದಿಲ್ಲ.

ವರ್ಗಾವಣೆಗೆ ಸಂಬಂಧಿಸಿದಂತೆ ಮಾಹಿತಿಗಳನ್ನು ಕಾಲಕಾಲಕ್ಕೆ ಇಲಾಖಾ ವೆಬ್‌ಸೈಟ್‌ನ ಬೋಧಕರ ವರ್ಗಾವಣೆ – 2022 Web page ನಲ್ಲಿ ಪ್ರಕಟಿಸಲಾಗುವುದು. ಸಂಬಂಧಿಸಿದವರು ಇಲಾಖಾ ವೆಬ್‌ಸೈಟ್ ಅನ್ನು ಗಮನಿಸುವುದು.

**(ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

20/12/2022

**ಮುಖ್ಯ ಆಡಳಿತಾಧಿಕಾರಿಗಳು**
**ಕಾಲೇಜು ಶಿಕ್ಷಣ ಇಲಾಖೆ**

**ಪ್ರತಿಯನ್ನು:**

1. ಸಂಬಂಧಪಟ್ಟ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಬೋಧಕರುಗಳಿಗೆ -ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಹಾಗೂ ಕಲಬುರಗಿ-ಮಾಹಿತಿಗಾಗಿ.
3. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
4. ರಕ್ಷಾ ಕಡತ.
5. ಕಛೇರಿ ಪ್ರತಿ.